ಕರ್ನಾಟಕ ವಿಧಾನ ಸಭೆ

ಬುಧವಾರ 22ನೇ ಏಪ್ರಿಲ್ 1998ರಂದು ಸದನವು ವಿಧಾನಸೌಧದಲ್ಲಿರುವ ವಿಧಾನಸಭೆಯ ಸಭಾಂಗಣದಲ್ಲಿ ಬೆಳಿಗ್ಗೆ 10.00 ಗಂಟೆಗೆ ಸಮಾವೇಶಗೊಂಡಿತು.

ಅಧ್ಯಕ್ಷರು ಶ್ರೀ ರಮೇಶ್‌ಕುಮಾರ್ ಅವರು ಪೀಠವನ್ನು ಅಲಂಕರಿಸಿದ್ದರು

ಸಂತಾಪ ಸೂಚನೆ

ವಿಷಯ: ಮಾಜಿ ಶಾಸಕರಾದ ಶ್ರೀ ಗೂಳಪ್ಪ ಉಪ್ಪಾಳ್‌ರವರ ನಿಧನ.

ಅಧ್ಯಕ್ಷರು: ಮಾಜಿ ಶಾಸಕರಾದ ಶ್ರೀ ಗೂಳಪ್ಪ ಉಪ್ಪಾಳ್‌ರವರು ದಿನಾಂಕ : 21-4-1998ರಂದು ನಿಧನರಾದದ್ದನ್ನು ವಿಷಾದದಿಂದ ಈ ಸದನಕ್ಕೆ ತಿಳಿಸುತ್ತಿದ್ದೇನೆ. ಶ್ರೀಯುತರು 1978 ರಿಂದ 1983ರವರೆಗೆ 6ನೇ ವಿಧಾನಸಭೆಗೆ ಆಯ್ಕೆಯಾಗಿದ್ದರು. ಮತ್ತೆ 1983 ರಿಂದ 1984ರ ಅವಧಿಯ 7ನೇ ವಿಧಾನಸಭೆಗೆ ಕ್ರಮವಾಗಿ ಶಿರಹಟ್ಟಿ ಕ್ಷೇತ್ರದಿಂದ ಕಾಂಗ್ರೆಸ್ ಅಭ್ಯರ್ಥಿಯಾಗಿ ಹಾಗೂ ಸ್ವತಂತ್ರ ಅಭ್ಯರ್ಥಿಯಾಗಿ ಆಯ್ಕೆಯಾಗಿದ್ದರು. ಶ್ರೀಯುತರು ಸಹಕಾರ ಕ್ಷೇತ್ರದ ಜನಪ್ರಿಯ ಧುರೀಣರು ಆಗಿದ್ದು, ಹಲವಾರು ಸಂಘ ಸಂಸ್ಥೆಗಳ ಅಧ್ಯಕ್ಷರಾಗಿ ಸಂಸ್ಥಾಪಕ ಸದಸ್ಯರು ಆಗಿದ್ದರು. ಶ್ರೀಯುತರು ಲಕ್ಕ್ಷೇಶ್ವರದ ಸೋಮೇಶ್ವರ ರೈತರ ಸಹಕಾರ ನೂಲಿನ ಗಿರಣಿಯ ಅಧ್ಯಕ್ಷರಾಗಿ ಹಾಗೂ ರಾಜ್ಯ ಉಗ್ರಾಣ ನಿಗಮದ ಅಧ್ಯಕ್ಷರಾಗಿ ಸೇವೆಯನ್ನು ಸಲ್ಲಿಸಿದ್ದರು. ಮೃತರ ಗೌರವಾರ್ಥ ಮಾನ್ಯ ಸದಸ್ಯರುಗಳು ಎದ್ದು ನಿಂತು ಒಂದು ನಿಮಿಷ ಮೌನವನ್ನಾಚರಿಸಬೇಕೆಂದು ಕೋರುತ್ತೇನೆ.

(ಮೃತರ ಗೌರವಾರ್ಥ ಸದನದ ಎಲ್ಲಾ ಸದಸ್ಯರು ಎದ್ದು ನಿಂತು ಒಂದು ನಿಮಿಷ ಮೌನವನ್ನಾಚರಿಸಿದರು)

ಅಧ್ಯಕ್ಷರು: ಈ ಸದನವು ಅಂಗೀಕರಿಸಿದ ಸಂತಾಪ ಸೂಚಕ ನಿರ್ಣಯವನ್ನು ಮೃತರ ಕುಟುಂಬ ವರ್ಗದವರಿಗೆ ಕಳುಹಿಸಿಕೊಡಲಾಗುವುದು.

2. ಪ್ರಶ್ನೋತ್ತರಗಳು

ಚುಕ್ಕೆ ಗುರ್ತಿನ ಪ್ರಶ್ನೆಗಳಿಗೆ ಬಾಯಿ ಮಾತಿನ ಮೂಲಕ ನೀಡಲಾದ ಉತ್ತರಗಳು

ವಿಷಯ: ಕೋಲಾರದಲ್ಲಿರುವ ಕಾನೂನು ಕಾಲೇಜನ್ನು ಮೇಲ್ದರ್ಜೆಗೇರಿಸುವುದು.

222 (1639)

ಶ್ರೀ ಜಿ.ವಿ.ಶ್ರೀರಾಮರೆಡ್ಡಿ (ಬಾಗೇಪಲ್ಲಿ): ಮಾನ್ಯ ಶಿಕ್ಷಣ ಸಚಿವರು ಈ ಕೆಳಕಂಡ